



ಅರುಣ ಪಿ. ಭಟ್ಟ

## ವಾರಭವಿಷ್ಯ: 14.05.2026ರಿಂದ 20.05.2026ರವರೆಗೆ




ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಸಾಧ್ಯತೆ. ಉದ್ಯೋಗ ಹಾಗೂ ವೃತ್ತಿಗೆ ಸಂಬಂಧಿಸಿದಂತೆ ವಾರದ ಶುರುವಿನಿಂದಲೂ ಕೆಲವು ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಇತರ ಸ್ಥಳದಲ್ಲಿ ನಡೆಯುತ್ತಿರುವ ಕೆಲಸಗಳನ್ನು ನಿರ್ವಹಿಸಲು ನಿಮ್ಮನ್ನು ನಿಯೋಜನೆ ಮಾಡಬಹುದು. ಇದನ್ನು ಅವಕಾಶವಾಗಿ ಬಳಸಿಕೊಳ್ಳುವುದರಲ್ಲಿ ಬಿಡುವಿಲ್ಲದಂತೆ ಆಗುತ್ತದೆ. ಶುಭದಿನ: 15. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.




ವಾರದ ಶುರುವಿನಿಂದ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಹಲವು ಕೆಲಸ ಕಾರ್ಯಗಳನ್ನು ಪೂರೈಸುತ್ತೀರಿ. ಸಹೋದ್ಯೋಗಿಗಳ ಜತೆಗೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ನಿಮ್ಮ ಕಾರ್ಯಗಳ ವಿಸ್ತರಣೆಗೆ ಸಂಬಂಧಿಸಿದಂತೆ ಪ್ರಮುಖವಾದ ತೀರ್ಮಾನವೊಂದನ್ನು ಕೈಗೊಳ್ಳಲಿದ್ದೀರಿ. ಶುಭದಿನ: 19. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಹಣಕಾಸಿನ ಸಂಸ್ಥೆಗಳ ಜತೆಗೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆ. ನಿಮ್ಮ ವ್ಯಾಪಾರ ವ್ಯವಹಾರಗಳನ್ನು ಬಲಪಡಿಸುವ ಸಲುವಾಗಿ ಹೆಚ್ಚು ಶ್ರಮ ಹಾಕಲಿದ್ದೀರಿ. ಇದರಿಂದ ನಿಮ್ಮಲ್ಲಿ ಉತ್ಸಾಹ ಮೂಡಲಿದೆ. ಹೆಚ್ಚಿನ ಹಣವನ್ನು ಖರ್ಚು ಮಾಡಲಿದ್ದೀರಿ. ನಿಮಗೆ ಯಶಸ್ಸು ದೊರೆಯುವ ಸಾಧ್ಯತೆ ಇದೆ. ವೈವಾಹಿಕ ಜೀವನವು ಸಂತೋಷವಾಗಿರುತ್ತದೆ. ಶುಭದಿನ: 18. ಚಾಮುಂಡಿ ಸ್ತುತಿ, ವನದುರ್ಗಾ ಆರಾಧನೆ ಮಾಡಿರಿ.




ನಿಮ್ಮ ಮಗನ ಏಳ್ಗೆಯಿಂದ ಮನಸಿಗೆ ಸಂತಸವಾಗುತ್ತದೆ. ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ಮಾಡುತ್ತಿರುವುದನ್ನು ಗಮನಿಸುತ್ತೀರಿ. ಆದಾಯ ಮೂಲಗಳು ಹೆಚ್ಚಿಸಿಕೊಳ್ಳುವುದರಲ್ಲಿ ಸಫಲರಾಗಲಿದ್ದು, ಅದರಿಂದ ಅನುಕೂಲ ದೊರೆಯಲು ಆರಂಭವಾಗುತ್ತದೆ. ನಿಮ್ಮ ಉತ್ಸಾಹದಾಯಕ ಸ್ವಭಾವವು ಸಂತಸವಾದ ವಾತಾವರಣವನ್ನು ಸೃಷ್ಟಿ ಮಾಡುತ್ತದೆ. ಶುಭದಿನ: 16. ಹನುಮಾನ್ ಚಾಲೀಸ್ ಪಠಿಸಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಕೆಲಸಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಕೆಲಸದಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ನಿಮ್ಮ ಮೇಲಧಿಕಾರಿಗಳಿಗೆ ಕೆಲಸದ ವರದಿ ನೀಡುತ್ತೀರಿ. ಉದ್ಯೋಗದಲ್ಲಿ ಹೆಮ್ಮೆ ಪಡುವಂಥ ಸನ್ನಿವೇಶ ಇದಾಗಿರುತ್ತದೆ. ತುಂಬ ವೇಗವಾಗಿ ಕೆಲಸಗಳನ್ನು ಪೂರೈಸಲು ಸಾಧ್ಯವಾಗುತ್ತದೆ. ಶುಭದಿನ: 18. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಹೆಚ್ಚಿನ ಶ್ರಮವನ್ನು ಹಾಕಬೇಕಾಗುತ್ತದೆ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರ ಸೋದರಿ ಸಹಾಯಕ್ಕೆ ನಿಲ್ಲುತ್ತಾರೆ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಕೆಲವು ಧಾರ್ಮಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಶುಭದಿನ: 19. ಆದಿತ್ಯ ಹೃದಯ ಪಠಿಸಿರಿ.




ಈ ವಾರ ಹೆಚ್ಚು ಚಟುವಟಿಕೆಯಿಂದ ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆ ಎದುರಿಸಬೇಕಾಗುತ್ತದೆ. ನೀವು ಪ್ರತಿನಿಧಿಸುವ ಸಂಸ್ಥೆಯ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೆಲವು ಸೂತ್ರಗಳನ್ನು ರೂಪಿಸಲಿದ್ದೀರಿ. ಇದು ಒತ್ತಡವಾಗಿ ಪರಿಣಮಿಸಿ, ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ. ಶುಭದಿನ 16. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ಸಿಬ್ಬಂದಿ ನೇಮಕದಲ್ಲಿ ಕೆಲವು ಸವಾಲುಗಳನ್ನು ಎದುರಿಸಬೇಕಾಗುತ್ತದೆ. ವೈವಾಹಿಕ ಜೀವನ ಸಂತಸದಾಯಕವಾಗಿರುತ್ತದೆ. ವ್ಯವಹಾರಕ್ಕೆ ಸಂಬಂಧಿಸಿದ ಪ್ರಮುಖ ಕೆಲಸ ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಶುಭದಿನ: 18. ಶ್ರೀಲಕ್ಷ್ಮೀನರಸಿಂಹ ಪಂಚರತ್ನ ಓದಿರಿ.




ಬೇರೊಬ್ಬರ ಮೇಲಿನ ಅವಲಂಬನೆ ಕಡಿಮೆ ಆಗುತ್ತದೆ. ಸಲಕರಣೆಗಳ ಖರೀದಿಗೆ ಹೆಚ್ಚಿನ ಹಣ ಖರ್ಚಾಗಲಿದೆ. ಹಣ ಹೂಡಿಕೆ ವ್ಯವಹಾರದಲ್ಲಿ ಅನುಕೂಲ ಆಗಲಿದೆ. ಈ ಅವಧಿಯಲ್ಲಿ ದೈಹಿಕ ಸಮಸ್ಯೆಗಳು ಕಾಡಬಹುದು. ಸಾಲ ಮರು ಪಾವತಿಯಲ್ಲಿ ಸಮಸ್ಯೆ ಎದುರಾಗುತ್ತದೆ. ವೈಯಕ್ತಿಕ ಸಂಬಂಧದಲ್ಲಿ ತೊಂದರೆ. ಸಮಸ್ಯೆ ಮತ್ತಷ್ಟು ಬಿಗಡಾಯಿಸಲಿದೆ. ಶುಭದಿನ: 14. ವಿಷ್ಣು ಸಹಸ್ರನಾಮ ಪಠಿಸಿರಿ.




ಆದಾಯದಲ್ಲಿ ಹೆಚ್ಚಳ ಆಗುತ್ತದೆ. ಜೀವನಶೈಲಿ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಡೀಕರಿಸಲು ಸಾಧ್ಯವಾಗುತ್ತದೆ. ವಿವಿಧ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಇದರಿಂದ ನಿಮಗೆ ಸಂತೋಷವಾಗುತ್ತದೆ. ನಿಮ್ಮ ಸಂಗಾತಿಯ ಭಾವನೆಗಳನ್ನು ಅರ್ಥ ಮಾಡಿಕೊಳ್ಳುವಲ್ಲಿ ಯಶಸ್ವಿ ಆಗುತ್ತೀರಿ. ಶುಭದಿನ: 17. ಶಿವಕವಚ ಪಠಣ ಮಾಡಿರಿ.




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ಇದರಿಂದ ನಿಮ್ಮ ಉತ್ಸಾಹ ಹೆಚ್ಚಾಗಲಿದೆ. ಈ ಹಿಂದೆ ನಿಮ್ಮನ್ನು ಮಾನಸಿಕವಾಗಿ ಚಿಂತೆಗೀಡು ಮಾಡಿದ್ದ ವಾತಾವರಣವು ಕರಗಲಿದೆ. ಆಹಾರ ಪಥ್ಯವನ್ನು ಅನುಸರಿಸಿ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ. ವೈಯಕ್ತಿಕ ಬದುಕು ಸಂತಸದಾಯಕವಾಗಿ ಇರುತ್ತದೆ. ಶುಭದಿನ: 15. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.




ಹಲವು ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಆಗುತ್ತದೆ. ಆರೋಗ್ಯದ ಬಗ್ಗೆ ಚಿಂತೆ ಉಂಟಾಗುತ್ತದೆ. ನಿಮ್ಮ ಸಾಮರ್ಥ್ಯ ಹೆಚ್ಚಾಗುತ್ತಾ ಸಾಗುತ್ತದೆ. ಆ ಮೂಲಕ ಕೆಲಸ ಕಾರ್ಯಗಳನ್ನು ಇನ್ನೂ ವೇಗವಾಗಿ ಮಾಡಲು ಸಾಧ್ಯವಾಗುತ್ತದೆ. ನಿಮ್ಮ ಜವಾಬ್ದಾರಿಗಳನ್ನು ಪೂರೈಸಲು ಹೆಚ್ಚು ಸಮಯವನ್ನು ಮೀಸಲಿಡುತ್ತೀರಿ. ಶುಭದಿನ: 18. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.